ಕರ್ನಾಟಕ ಸರ್ಕಾರ

ಸಾರ್ವಜನಿಕ ಶಿಕ್ಷಣ ಇಲಾಖೆ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು–560001

ಕಡತ ಸಂ:ಸಿಪಿಇ(2)/ಪಾದರಕ್ಷೆ (ಷೂ)–06/2018–19 ದಿನಾಂಕ:24.07.2019

**"ಅತೀ ತುರ್ತು"**

– ಜ್ಞಾಪನಾ –

ವಿಷಯ:– 2019–20ನೇ ಸಾಲಿಗೆ ರಾಜ್ಯದಲ್ಲಿನ ಸರ್ಕಾರಿ ಶಾಲೆಗಳಲ್ಲಿ 1 ರಿಂದ 10ನೇ ತರಗತಿ ವ್ಯಾಸಂಗ ಮಾಡುತ್ತಿರುವ ಎಲ್ಲಾ ಮಕ್ಕಳಿಗೆ ಷೂ ಮತ್ತು ಸಾಕ್ಸ್ ವಿತರಿಸುವ ಪ್ರಕ್ರಿಯೆಯನ್ನು ಚುರುಕುಗೊಳಿಸುವ ಬಗ್ಗೆ.

ಉಲ್ಲೇಖ:– 1. ಸರ್ಕಾರದ ಆದೇಶ ಸಂಖ್ಯೆ: ಇಡಿ 134 ಯೋಯೋಕ 2018 ದಿನಾಂಕ:06–05–2019
2. ಈ ಕಛೇರಿ ಸುತ್ತೋಲೆ ದಿನಾಂಕ: 21–06–2019

2019–20ನೇ ಶೈಕ್ಷಣಿಕ ಸಾಲಿಗೆ ರಾಜ್ಯದಲ್ಲಿ ಶಿಕ್ಷಣ ಇಲಾಖೆಯ ವತಿಯಿಂದ ನಡೆಸಲ್ಪಡುವ ಸರ್ಕಾರಿ ಶಾಲೆಗಳಲ್ಲಿ 1 ರಿಂದ 10ನೇ ತರಗತಿಯಲ್ಲಿ ವ್ಯಾಸಂಗ ಮಾಡಲಿರುವ ಅಂದಾಜು 43.61 ಲಕ್ಷ ವಿದ್ಯಾರ್ಥಿ ಮತ್ತು ವಿದ್ಯಾರ್ಥಿನಿಯರಿಗೆ ಉಚಿತವಾಗಿ ಒಂದು ಜೊತೆ ಷೂ ಮತ್ತು ಎರಡು ಜೊತೆ ಸಾಕ್ಸ್‌ಗಳನ್ನು ಶಾಲಾ ಅಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿಯ ಮುಖಾಂತರ ಖರೀದಿಸಿ ವಿತರಿಸುವ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ಉಲ್ಲೇಖಿತ ಸರ್ಕಾರದ ಆದೇಶದಲ್ಲಿ ಸೂಚಿಸಲಾಗಿದೆ.

ಅದರಂತೆ ಈಗಾಗಲೇ ಬೆಳಗಾವಿ ಮತ್ತು ಕಲಬುರ್ಗಿ ವಿಭಾಗದ 20501 ಶಾಲೆಗಳ ಎಸ್.ಡಿ.ಎಂ.ಸಿ. ಖಾತೆಗಳಿಗೆ ಕ್ರಮವಾಗಿ ರೂ. 75.00 ಕೋಟಿಗಳನ್ನು ಜಮೆ ಮಾಡಲಾಗಿದೆ.ಮುಂದುವರೆದು ಶೀಘ್ರದಲ್ಲಿಯೇ ಬೆಂಗಳೂರು ಮತ್ತು ಮೈಸೂರು ವಿಭಾಗದ ಉಳಿದ ಶಾಲೆಗಳಿಗೆ ಬಿ.ಎಂ.ಎಸ್. ಮೂಲಕ ಹಣ ಜಮೆ ಮಾಡಲು ಕ್ರಮವಹಿಸಲಾಗುವುದು. ಪ್ರಸ್ತುತ ಅನುದಾನ ಬಿಡುಗಡೆ ಮಾಡಿರುವ ವಿವರವನ್ನು SHOE AND SOCKS FUND RELEASE ಎಂಬ ಶೀರ್ಷಿಕೆಯಲ್ಲಿ SCHOOL EDUCATION WEBSITEನಲ್ಲಿ ಮಾಹಿತಿಗಾಗಿ ಒದಗಿಸಲಾಗಿದೆ ಹಾಗೂ ಎಲ್ಲಾ ಉಪನಿರ್ದೇಶಕರುಗಳಿಗೆ ಈ ಮೇಲ್ ಮುಖಾಂತರ ಕಳುಹಿಸಲಾಗಿದೆ. ಉಲ್ಲೇಖ–{2}ರ ಈ ಕಛೇರಿ ಸುತ್ತೋಲೆಯಲ್ಲಿ ಸಂಪೂರ್ಣ ವಿವರಗಳನ್ನು ತಮಗೆ ನೀಡಲಾಗಿದೆ.

**ಮುಂದುವರೆದು, ಶೂ ಮತ್ತು ಸಾಕ್ಸ್ ಖರೀದಿ ಪ್ರಕ್ರಿಯೆಗೆ ರೂ 1 ಲಕ್ಷ ಮೀರುವಂತಹ ಶಾಲೆಗಳಿಗೆ 4(ಜಿ) ಅಡಿಯಲ್ಲಿ ವಿನಾಯಿತಿಗಾಗಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದ್ದು ಆದೇಶ ಪ್ರತಿ ನಿರೀಕ್ಷಿಸಲಾಗಿದೆ. ಉಳಿದ ಶಾಲೆಗಳವರು ನಿಯಮಾನುಸಾರ ಕರ್ನಾಟಕ ಪಾರದರ್ಶಕ ಅಧಿನಿಯಮದಡಿ ಪ್ರಸ್ತಾಪಿಸಿರುವಂತೆ ದರಪಟ್ಟಿ ಕರೆದು ಕನಿಷ್ಠ ದರಗಳು ಬಂದಲ್ಲಿ ದರಪಟ್ಟಿ ಪರಿಶೀಲಿಸಿ ಎಲ್–1 ಆಗಿ ಆಯ್ಕೆಯಾಗುವ ಸರಬರಾಜುದಾರರಿಗೆ ಕಾರ್ಯಾದೇಶ ನೀಡುವುದು. ಶೂ ಮತ್ತು ಸಾಕ್ಸ್ ಸರಬರಾಜು ಪ್ರಕ್ರಿಯೆ ಮುಗಿಯುತ್ತಿದ್ದಂತೆ ಸಂಬಂಧಪಟ್ಟ ಸರಬರಾಜುದಾರರಿಗೆ ಹಣವನ್ನು ಚೆಕ್ ಮೂಲಕ ವಿತರಣೆ ಮಾಡಲು ಸೂಚಿಸಿದೆ. ಹಾಗೂ ಕಾಲಕಾಲಕ್ಕೆ ಪ್ರಗತಿ ವಿವರಗಳನ್ನು ಈ ಕಛೇರಿಗೆ ವರದಿ ಮಾಡಲು ತಿಳಿಸಿದೆ**

(ಕೆ.ಎಸ್. ಮಣಿ)
ನಿರ್ದೇಶಕರು
ಉರ್ದು ಮತ್ತು ಇತರೆ ಅಲ್ಪಸಂಖ್ಯಾತ ಭಾಷಾ
ನಿರ್ದೇಶಾನಲಯ, ಸಾರ್ವಜನಿಕ ಶಿಕ್ಷಣ ಇಲಾಖೆ.
ಬೆಂಗಳೂರು

ಗೆ.

1. ರಾಜ್ಯದಲ್ಲಿನ ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಉಪನಿರ್ದೇಶಕರು(ಆಡಳಿತ) ಇವರಿಗೆ ಸೂಕ್ತ ಕ್ರಮಕ್ಕಾಗಿ.
2. ರಾಜ್ಯದಲ್ಲಿನ ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಸೂಕ್ತ ಕ್ರಮಕ್ಕಾಗಿ.
3. ಎಲ್ಲಾ ಸರ್ಕಾರಿ ಶಾಲಾ ಮುಖ್ಯಸ್ಥರಿಗೆ (ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳ ಮೂಲಕ)

**ಪ್ರತಿಗಳನ್ನು ಮಾಹಿತಿಗಾಗಿ ಈ ಕೆಳಕಂಡವರಿಗೆ ಕಳುಹಿಸುತ್ತಾ ಸೂಕ್ತ ಮೇಲ್ವಿಚಾರಣೆ ನಡೆಸಲು ತಿಳಿಸಿದೆ.**

1. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ ಮತ್ತು ಗುಲ್ಬರ್ಗ ವಿಭಾಗ.
2. ಆಯುಕ್ತರ ಆಪ್ತಶಾಖೆಗೆ
3. ಕಛೇರಿ ಪ್ರತಿ

f:\shoe and socks 2019-20\a main file.docx

SADPI | PRO